ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

23

ಇಲಾಖೆ / ವಿಷಯ : DEPARTMENT / SUBJECT: ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 1-12-2020

# ಡಿಗ್ರಿ ಕಾಲೇಜಿಗೆ ಸ್ಮಾರ್ಟ್ ವ್ಯವಸ್ಥೆ

## 'ಕರ್ನಾಟಕ ಕಲಿಕಾ ವ್ಯವಸ್ಥೆ'ಗೆ ಸಿಎಂ ಯಡಿಯೂರಪ್ಪ ಚಾಲನೆ

▫ ವಿಕ ಸುದ್ದಿಲೋಕ ಬೆಂಗಳೂರು 1/12/20

ಸರಕಾರಿ ಪದವಿ, ಎಂಜಿನಿಯರಿಂಗ್ ಮತ್ತು ಡಿಪ್ಲೊಮಾ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲು 'ನೂತನ ಕಲಿಕಾ ನಿರ್ವಹಣಾ ವ್ಯವಸ್ಥೆ (ಲರ್ನಿಂಗ್ ಮ್ಯಾನೇಜ್‌ಮೆಂಟ್ ಸಿಸ್ಟಮ್)' ಮುಖ್ಯಮಂತ್ರಿ ಬಿ. ಎಸ್.ಯಡಿಯೂರಪ್ಪ ಸೋಮವಾರ ಚಾಲನೆ ನೀಡಿದರು.

ಮುಖ್ಯಮಂತ್ರಿಗಳ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕರ್ನಾಟಕ ಎಲ್‌ಎಂಎಸ್‌ಗೆ ಚಾಲನೆ ನೀಡಲಾಯಿತು.

ಇದೇ ವೇಳೆ ಮಾತನಾಡಿದ ಬಿ.ಎಸ್.ಯಡಿಯೂರಪ್ಪ, "ನೂತನ ಕಲಿಕಾ ನಿರ್ವಹಣಾ ವ್ಯವಸ್ಥೆಯಿಂದಾಗಿ ವಿದ್ಯಾರ್ಥಿಗಳು ತಾವಿದ್ದ ಜಾಗದಿಂದಲೇ ಜ್ಞಾನಾರ್ಜನೆ ಮಾಡಬಹುದಾಗಿದೆ. 'ಲರ್ನಿಂಗ್ ಫ್ರಮ್ ಎನಿವೇರ್' ಎನ್ನುವ ಪರಿಕಲ್ಪನೆಯನ್ನು ಇದು ಸಾಕಾರಗೊಳಿಸುತ್ತದೆ. ಇದರಿಂದ ಸಾಮಾಜಿಕ, ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಹೆಚ್ಚು ಸಹಕಾರಿಯಾಗುತ್ತದೆ," ಎಂದರು.

ಉನ್ನತ ಶಿಕ್ಷಣ ಸಚಿವರೂ ಆದ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಮಾತನಾಡಿ, "ಕೋವಿಡ್ನಿಂದಾಗಿ ಕಲಿಕೆಯಿಂದ ವಂಚಿತವಾಗುತ್ತಿರುವ ವಿದ್ಯಾರ್ಥಿಗಳಿಗೆ ನೂತನ ಕಲಿಕಾ ನಿರ್ವಹಣಾ ವ್ಯವಸ್ಥೆ ವರದಾನವಾಗಿದೆ. ದೇಶದಲ್ಲೇ ಇದು ಹೊಸ ರೀತಿಯ ಪ್ರಯತ್ನವಾಗಿದ್ದು, ಈ ಉಪಕ್ರಮದಿಂದ ಸರಕಾರಿ ಕಾಲೇಜುಗಳ ಪದವಿ, ಎಂಜಿನಿಯರಿಂಗ್, ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತದೆ. ವಿದ್ಯಾರ್ಥಿಗಳು ಕಲಿಕೆಯಲ್ಲಿ ಎದುರಿಸುತ್ತಿರುವ ಸಮಸ್ಯೆಗಳಿಗೂ ಇದು ಪರಿಹಾರ ಸೂಚಿಸಲಿದೆ. ಈ ವ್ಯವಸ್ಥೆಯ ಮೂಲಕ ಲೈವ್ ತರಗತಿಗಳಲ್ಲಿ ವಿದ್ಯಾರ್ಥಿಗಳೂ ಭಾಗಿಯಾಗಬಹುದು," ಎಂದು ಹೇಳಿದರು.

"ಜಾಗತಿಕ ಮಟ್ಟದಲ್ಲಿ ಬೋಧನೆ- ಕಲಿಕೆಯಲ್ಲಿ ಗುರುತರ ಬದಲಾವಣೆಗಳಾಗುತ್ತಿವೆ. ಇದನ್ನು ಕ್ಷಿಪ್ರವಾಗಿ ಗ್ರಹಿಸಿ ರಾಜ್ಯದಲ್ಲೂ ನೂತನ ಪದ್ಧತಿ ಜಾರಿಗೆ ತರಲಾಗಿದೆ. ರಾಜ್ಯದ ಸರಕಾರಿ ಎಂಜಿನಿಯರಿಂಗ್, ಪದವಿ, ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಸದ್ಯ ಒಟ್ಟು ಎಂಟು ಸಾವಿರ ತರಗತಿ ಕೊಠಡಿಗಳಿವೆ. ಇವುಗಳ ಪೈಕಿ 2,500 ಕೊಠಡಿಗಳನ್ನು ಕೂಡಲೇ ಅತ್ಯಂತ ವೇಗದ ವೈಫೈ ವ್ಯವಸ್ಥೆ ಇರುವ ಸ್ಮಾರ್ಟ್ ಕೊಠಡಿಗಳನ್ನಾಗಿ ರೂಪಿಸಲಾಗುತ್ತಿದೆ. ಉಳಿದ 5,500 ಕೊಠಡಿಗಳನ್ನು 4ರಿಂದ 5 ತಿಂಗಳಲ್ಲಿ ಸ್ಮಾರ್ಟ್ ಕ್ಲಾಸ್‌ಗಳನ್ನಾಗಿ ಪರಿವರ್ತಿಸಲಾಗುವುದು. ಹಾಗಾಗಿ, ಎಲ್‌ಎಂಎಸ್ ವ್ಯವಸ್ಥೆಯ ಮೂಲಕ ಈ ಎಲ್ಲಾ ಕಾಲೇಜುಗಳ 5 ಲಕ್ಷ ವಿದ್ಯಾರ್ಥಿಗಳು ಹಾಗೂ ಎಲ್ಲಾ ಬೋಧಕರು ಏಕಕಾಲದಲ್ಲಿಯೇ ಲಾಗಿನ್ ಆಗಬಹುದು," ಎಂದು ಮಾಹಿತಿ ನೀಡಿದರು.

ನೂತನ ಕಲಿಕಾ ನಿರ್ವಹಣಾ ಪದ್ಧತಿಯಲ್ಲಿ ಆನ್‌ಲೈನ್, ಆಫ್‌ಲೈನ್‌ನಲ್ಲೂ ಕಲಿಯಬಹುದು. ಡೆಸ್ಕ್‌ಟಾಪ್, ಆ್ಯಂಡ್ರಾಯ್ಡ್ ಐಒಎಸ್‌ಗೆ ಪೂರಕವಾಗಿ ಇದನ್ನು ಅಭಿವೃದ್ಧಿಪಡಿಸಲಾಗಿದೆ. ದಿನನಿತ್ಯದ ಕಂಟೆಂಟ್ ನೀಡುವುದರ ಜತೆಗೆ, ವಿದ್ಯಾರ್ಥಿಗಳ ಮೌಲ್ಯಮಾಪನವನ್ನೂ ಮಾಡಬಹುದು ಎಂದು ಡಾ. ಅಶ್ವತ್ಥನಾರಾಯಣ ತಿಳಿಸಿದರು. ಎಲ್‌ಎಂಎಸ್ ಪೋರ್ಟಲ್‌ಗೆ www.karnatakalms.com ಲಿಂಕ್ ಮೂಲಕ ಲಾಗಿನ್ ಆಗಬಹುದು.

### ಎಲ್‌ಎಂಎಸ್‌ನ ಪ್ರಮುಖ ಅಂಶಗಳು

- ರಾಜ್ಯಾದ್ಯಂತ 430 ಸರಕಾರಿ ಪ್ರಥಮ ದರ್ಜೆ ಕಾಲೇಜು, 14 ಸರಕಾರಿ ಎಂಜಿನಿಯರಿಂಗ್ ಮತ್ತು 87 ಸರಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಜಾರಿ
- ಎಲ್‌ಎಂಎಸ್‌ನಿಂದ ಸುಮಾರು 4.5 ಲಕ್ಷ ವಿದ್ಯಾರ್ಥಿಗಳ ಕಲಿಕೆ ಹಾಗೂ 24 ಸಾವಿರ ಅಧ್ಯಾಪಕರ ಬೋಧನೆಯಲ್ಲಿ ಕ್ರಾಂತಿಕಾರಕ ಬದಲಾವಣೆಗೆ ನಾಂದಿ
- ಡಿಜಿಟಲ್ ಕಲಿಕೆ ಪದ್ಧತಿಯು ವಿಷಯ ಸಂವಹನ, ವಿಷಯ ಲಭ್ಯತೆ ಮತ್ತು ಮೌಲ್ಯಮಾಪನದಲ್ಲಿ ಮಹತ್ವದ ಬದಲಾವಣೆಗಳನ್ನು ತರುತ್ತದೆ.
- ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರು, ವಿವಿಧ ಭಾಷೆಗಳಲ್ಲಿ 14 ಸಂಯೋಜಿತ ವಿಶ್ವವಿದ್ಯಾಲಯಗಳ ಪಠ್ಯಕ್ಕೆ ಪೂರಕವಾಗಿ ಸ್ವ-ಕಲಿಕೆ ಮತ್ತು ಪಿಪಿಟಿ, ವಿಡಿಯೊ ರೂಪದ ಇ-ಕಂಟೆಂಟ್, ಅಸೈನ್‌ಮೆಂಟ್‌ಗಳು, ಇ-ಅಧ್ಯಯನ ಮಾಹಿತಿ, ಪ್ರಶ್ನೋತ್ತರ ವಿವರ, ಕ್ವಿಜ್ ಲಭ್ಯ